**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/44/ಮ.ಲೇ.ಆ./2017-18/ಸೇವಿ-1

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು, ದಿನಾಂಕ:27-10-2018.

**ಇವರಿಗೆ:**

ಪ್ರಾದೇಶಿಕ ಜಂಟಿ ನಿರ್ದೇಶಕರು,
ಕಾಲೇಜು ಶಿಕ್ಷಣ ಇಲಾಖೆ,
**ಬೆಂಗಳೂರು, ಮೈಸೂರು, ಶಿವಮೊಗ್ಗ,**
**ಮಂಗಳೂರು, ಧಾರವಾಡ ಹಾಗೂ ಕಲಬುರಗಿ.**

ನೆನಪೋಲೆ

ಮಾನ್ಯರೆ,

**ವಿಷಯ:** ಯುಜಿಸಿಯು ನಿಗದಿಪಡಿಸಿರುವ ಹೆಚ್ಚುವರಿ ವಿದ್ಯಾರ್ಹತೆಯಾದ NET/SLET/PhD ಪದವಿಯನ್ನು ಪಡೆಯದೆ 2006ರ ಯುಜಿಸಿ ವೇತನ ಶ್ರೇಣಿ ಪಡೆಯುತ್ತಿರುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಪತ್ರ ಸಂಖ್ಯೆ:ಶಿಇ/205/ಐಎಫ್ (ಬಿ&ಎ) 2018, ದಿನಾಂಕ:20-08-2018.
2. Report of the comptroller and Auditor General of India on General and Social Section for the year ended March 2017 ರ ವರದಿಯಲ್ಲಿನ ಕಂಡಿಕೆ ಸಂಖ್ಯೆ: 4.1.5
3. ಈ ಕಛೇರಿಯ ಸಮ ಸಂಖ್ಯೆಯ ಸುತ್ತೋಲೆ ದಿನಾಂಕ:12-09-2017 ಮತ್ತು 10-09-2018.

*****

**ಸೂಚಿತ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ, ಸರ್ಕಾರಿ ಮತ್ತು ಅನುದಾನಿತ ಕಾಲೇಜುಗಳಲ್ಲಿನ ಬೋಧಕರುಗಳಿಗೆ 2006ರ ಪರಿಷ್ಕೃತ ಯುಜಿಸಿ ವೇತನ ಶ್ರೇಣಿಗಳನ್ನು ದಿನಾಂಕ:24-12-2009ರ ಸರ್ಕಾರಿ ಆದೇಶ ಸಂಖ್ಯೆ: ಇಡಿ/37/ಯುಎನ್ಇ/ 2009ರಲ್ಲಿ ವಿಸ್ತರಿಸಿದ್ದು, ಸದರಿ ಆದೇಶದ ಕಂಡಿಕೆ 7 (viii)-7(ix) ಹಾಗೂ 21.5ಗಳಲ್ಲಿ ವಿಸ್ತರಿಸುವ ಬಗ್ಗೆ ಸೂಚನೆಗಳನ್ನು ನೀಡಲಾಗಿತ್ತು ಸದರಿ ಕಂಡಿಕೆಗಳಲ್ಲಿ ನೀಡಲಾಗಿರುವ ಸೂಚನೆಗಳನ್ನು ಪಾಲಿಸದೇ ಮತ್ತು ಅಗತ್ಯ ವಿದ್ಯಾರ್ಹತೆಯನ್ನು ಹೊಂದದಿದ್ದಾಗ್ಯೂ 2006ರ ಪರಿಷ್ಕೃತ ಯುಜಿಸಿ ವೇತನ ಶ್ರೇಣಿಗಳಲ್ಲಿ ಸರ್ಕಾರಿ/ಅನುದಾನಿತ ಪದವಿ/ಶಿಕ್ಷಣ/** ಕಾನೂನು ಕಾಲೇಜುಗಳ ಬೋಧಕರುಗಳಿಗೆ ವೇತನ ನಿಗದಿಪಡಿಸಿರುವ ಕುರಿತು ಉಲ್ಲೇಖಿತ ಪತ್ರದಲ್ಲಿ ಮಹಾಲೇಖಪಾಲರು ಆಕ್ಷೇಪಣೆಯನ್ನು ವ್ಯಕ್ತಪಡಿಸಿರುತ್ತಾರೆ. ಈ ಕಛೇರಿಯ ಸಮ ಸಂಖ್ಯೆಯ ದಿನಾಂಕ: 10-09-2018ರ ಪತ್ರದಲ್ಲಿ ಮಹಾಲೇಖಪಾಲರ ಟೆಸ್ಟ್-ಚೆಕ್‌ನಲ್ಲಿ ಆಕ್ಷೇಪಿತ ಉಪನ್ಯಾಸಕರುಗಳ ಪಟ್ಟಿಯನ್ನು ಲಗತ್ತಿಸಿದ್ದು, ಈ ಪಟ್ಟಿಯಲ್ಲಿನ ಉಪನ್ಯಾಸಕರುಗಳ ವೇತನ ನಿಗದಿಪಡಿಸಿರುವ ಬಗ್ಗೆ ಸಂಬಂಧಪಟ್ಟ ಕಾಲೇಜುಗಳಿಗೆ ಖುದ್ದಾಗಿ ಭೇಟಿ ನೀಡಿ ದಾಖಲೆಗಳನ್ನು ಪರಿಶೀಲಿಸಿ ಲಗತ್ತಿಸಲಾಗಿರುವ ನಮೂನೆಯಲ್ಲಿ ವಿವರಗಳನ್ನು ಭರ್ತಿ ಮಾಡಿ ಸ್ಪಷ್ಟ ಅಭಿಪ್ರಾಯ ಮತ್ತು ದೃಢೀಕೃತ ದಾಖಲೆಗಳೊಂದಿಗೆ ವರದಿಯನ್ನು

ಪು.ತಿ.ನೋ

ಕ್ರೋಢೀಕರಿಸಿ ಈ ಕಛೇರಿಗೆ ದಿನಾಂಕ:20-09-2018 ರೊಳಗೆ ಸಲ್ಲಿಸುವಂತೆ ಸೂಚಿಸಲಾಗಿದ್ದು. ಸದರಿ ಮಾಹಿತಿಯ ಹಾರ್ಡ್ ಕಾಪಿ ಹಾಗೂ ಸಾಫ್ಟ್ ಕಾಪಿಯನ್ನು ಇ-ಮೇಲ್ ವಿಳಾಸ (dceservice1@gmail.com) ಮೂಲಕ ಸಲ್ಲಿಸಲು ಈಗಾಗಲೇ ಉಲ್ಲೇಖ (3) ರ ಪತ್ರದಲ್ಲಿ ಸೂಚಿಸಲಾಗಿತ್ತು. ಆದರೆ ಇದುವರೆವಿಗೂ ಕ್ರೋಢೀಕೃತ ಮಾಹಿತಿ ಸಲ್ಲಿಸಿಲ್ಲದಿರುವುದು ಗಮನಕ್ಕೆ ಬಂದಿರುತ್ತದೆ. ಸದರಿ ವಿಷಯವು Public Accounts Committee ಮುಂದೆ ಪ್ರಸ್ತುತಪಡಿಸಲಾದಲ್ಲಿ ವಿಷಯವು ತೀವ್ರ ಸ್ವರೂಪವನ್ನು ಪಡೆದುಕೊಳ್ಳಲಿರುವುದರಿಂದ ತುರ್ತಾಗಿ ಅಗತ್ಯ ಮಾಹಿತಿಯನ್ನೊಳಗೊಂಡಂತೆ ವರದಿಯನ್ನು ಈ ಕಛೇರಿಗೆ ಸಲ್ಲಿಸುವಂತೆ ಈ ಮೂಲಕ ತಿಳಿಸಲಾಗಿದೆ. ತಪ್ಪಿದಲ್ಲಿ ಮುಂದಿನ ಆಗು-ಹೋಗುಗಳಿಗೆ ತಮ್ಮನ್ನೇ ನೇರ ಹೊಣೆಗಾರರನ್ನಾಗಿ ಪರಿಗಣಿಸಲಾಗುವುದು

27/10/18

ಕಾಲೇಜು ಶಿಕ್ಷಣ ನಿರ್ದೇಶಕರು

**ಇವರಿಗೆ:**

ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರುಗಳಿಗೆ- ಅಗತ್ಯ ಕ್ರಮಕ್ಕಾಗಿ.

**ಪ್ರತಿಗಳು:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ(ಉನ್ನತ ಶಿಕ್ಷಣ), ಬಹುಮಹಡಿ ಕಟ್ಟಡ, ಬೆಂಗಳೂರು-ಮಾಹಿತಿಗಾಗಿ
2. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
3. ಆಯುಕ್ತರ ಆಪ್ತ ಶಾಖೆ, ಕೇಂದ್ರ ಕಛೇರಿ, ಬೆಂಗಳೂರು.
4. ನಿರ್ದೇಶಕರ ಆಪ್ತಶಾಖೆ, ಕೇಂದ್ರ ಕಛೇರಿ, ಬೆಂಗಳೂರು.
5. ಮುಖ್ಯಆಡಳಿತಾಧಿಕಾರಿಗಳ ಆಪ್ತ ಶಾಖೆ, ಕೇಂದ್ರ ಕಛೇರಿ, ಬೆಂಗಳೂರು.
6. ಮ್ಯಾನೇಜರ್/ಅಧೀಕ್ಷಕರು, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು- ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.
7. ಕಛೇರಿ ಪ್ರತಿ.